# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 623 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21-02-2023 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಪ್ರಸ್ತುತ ನೀಡುತ್ತಿರುವ ಆಹಾರ ಪದಾರ್ಥಗಳು ಯಾವುವು; ಮತ್ತು ಇವುಗಳು ಯಾವ ಗುಣಮಟ್ಟದ ಕಂಪನಿಗಳಿಂದ ಕೂಡಿವೆ; | (see below) |

- ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿರುವ 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ಪುಷ್ಠಿ ಪುಡಿರೂಪದ ಆಹಾರವನ್ನು ಮನೆಗೆ ವಿತರಿಸಲಾಗುತ್ತಿದೆ.
- 3 ರಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರ ನಿಗದಿಪಡಿಸಿದ ಘಟಕ ವೆಚ್ಚದಲ್ಲಿ ಜಿಲ್ಲಾಧಿಕಾರಿಗಳ ಜಿಲ್ಲಾ ಮೇಲ್ವಿಚಾರಣಾ ಸಮಿತಿಯು ನಿಗದಿಪಡಿಸಿದ ಮೆನುವಿನ ಆಧಾರದ ಮೇಲೆ ಈ ಕೆಳಗಿನಂತೆ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ.

| ಕ್ರ. ಸಂ. | ವಿವರ | ಆಹಾರ ಪದಾರ್ಥಗಳು |
|---|---|---|
| 1 | 150 ಎಂ.ಎಲ್. ಹಾಲು | ಕೆನೆಭರಿತ ಹಾಲಿನ ಪುಡಿ, ಸಕ್ಕರೆ |
| 2 | ಮೊಳಕೆ ಭರಿಸಿದ ಕಾಳು/ ಶೇಂಗಾ ಬೀಜದ ಚಿಕ್ಕಿ | ಹೆಸರುಕಾಳು / ಶೇಂಗಾಬೀಜ ಮತ್ತು ಬೆಲ್ಲ. |
| 3 | ಅನ್ನಸಾಂಬಾರ್/ ಚಿತ್ರಾನ್ನ / ಗೋಧಿ ರವೆ ಪಾಯಸ, | ಅಕ್ಕಿ, ತೊಗರಿಬೇಳೆ, ಸಾಂಬಾರ್ ಪದಾರ್ಥ/ ಅಕ್ಕಿ, ಸಾಸುವೆ, ಎಣ್ಣೆ/ ಗೋದಿರವೆ, ಬೆಲ್ಲ |
| 4 | ಮೊಟ್ಟೆ | ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ |

- ಅಂಗನವಾಡಿ ಕೇಂದ್ರಗಳಿಗೆ ಇಲಾಖಾ ವತಿಯಿಂದ ಸ್ಥಾಪಿಸಲ್ಪಟ್ಟ 137 ಎಂ.ಎಸ್.ಪಿ.ಟಿ.ಸಿ. ಗಳು ಪೂರಕ ಪೌಷ್ಠಿಕ ಆಹಾರ ಪದಾರ್ಥಗಳನ್ನು ಪೂರೈಸುತ್ತಿವೆ.
- ಅಂಗನವಾಡಿ ಫಲಾನುಭವಿಗಳಿಗೆ ವಿತರಿಸಲಾಗುತ್ತಿರುವ ಹಾಲಿನ ಪುಡಿಯನ್ನು ಕೆ.ಎಂ.ಎಫ್. ರವರಿಂದ ಖರೀದಿಸಲಾಗುತ್ತಿದೆ.
- ಅಂಗನವಾಡಿ ಫಲಾನುಭವಿಗಳಿಗೆ ಕೋಳಿಮೊಟ್ಟೆಗಳನ್ನು ತಾಲ್ಲೂಕು ಮಟ್ಟದಲ್ಲಿ ಟೆಂಡರ್ ಕರೆಯುವ ಮೂಲಕ ಖರೀದಿಸಿ ವಿತರಿಸಲಾಗುತ್ತಿದೆ.

ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಈಗಾಗಲೇ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಿಗೆ ಒದಗಿಸುತ್ತಿರುವ ಆಹಾರ ಪದಾರ್ಥಗಳು ಉತ್ತಮ ಗುಣಮಟ್ಟದಿಂದ ಕೂಡಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ.

| | | |
|---|---|---|
| ಆ. | ಅಂಗನವಾಡಿ ಕೇಂದ್ರದ ಮಕ್ಕಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳನ್ನು ಇನ್ನೂ ಹೆಚ್ಚಳ ಮಾಡಿ ಉತ್ತಮ ಗುಣಮಟ್ಟವುಳ್ಳ ಕಂಪನಿಯ ಆಹಾರ ಪದಾರ್ಥಗಳನ್ನು ನೀಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ಪ್ರಸ್ತುತ ವರ್ಷದಿಂದ ಅಂಗನವಾಡಿ ಕೇಂದ್ರದ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ತೀವ್ರ ಅಪೌಷ್ಠಿಕ ಮಕ್ಕಳಿಗೆ ನೀಡುತ್ತಿರುವಂತೆ 3 ದಿನ ಮೊಟ್ಟೆ ಮತ್ತು 3 ದಿನ 200 ಎಂ.ಎಲ್. ಹಾಲನ್ನು ಹೆಚ್ಚುವರಿಯಾಗಿ ನೀಡಲು ಕ್ರಮ ವಹಿಸಲಾಗಿದೆ.<br><br>ಮುಂದುವರೆದು, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಈಗಾಗಲೇ ಗುಣಮಟ್ಟದ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಿಗೆ ಒದಗಿಸುತ್ತಿರುವ ಆಹಾರ ಪದಾರ್ಥಗಳು ಉತ್ತಮ ಗುಣಮಟ್ಟದಿಂದ ಕೂಡಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಒಳಪಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ. |

**ಸಂಖ್ಯೆ:ಮಮಇ 32 ಐಸಿಡಿ 2023**

Halappa BA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.